ಓ.ಎಸ್. ನಂ. 180/2014

ಪಿ.ಡಬ್ಲ್ಯು: 03 (ಅಂಬರೀಶ)

ದಿನಾಂಕಃ 05.06.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ – ಶ್ರೀ ಬಿ ಎನ್ ಆರ್ ವಕೀಲರಿಂದ.

ನಾನು ಸಾಕ್ಷಿ ನುಡಿಯಲು ಯಾವುದಾದರೂ ದಾಖಲಾತಿ ನೋಡಿದ್ದೇನೆಯೇ ಎಂದರೆ ಇಲ್ಲ. ನಾನು ಇಲ್ಲಿ ಸ್ವಾಧೀನದ ಬಗ್ಗೆ ಮಾತ್ರ ಸಾಕ್ಷಿ ನುಡಿಯಲು ಬಂದಿರುತ್ತೇನೆ. ಮುಖ್ಯ ವಿಚಾರಣೆಯಲ್ಲಿ ಹೇಳಿರುವಂತೆ ಅದರಲ್ಲಿ ಸ್ವಲ್ಪ ವಿಸ್ತೀರ್ಣವನ್ನು ನಾನು ಸಾಗುವಳಿ ಮಾಡುತ್ತಿದ್ದೇನೆ, ಆದ್ದರಿಂದ ನನಗೆ ಸ್ವಾಧೀನದ ಬಗ್ಗೆ ಗೊತ್ತಿರುತ್ತದೆ. ಆ ಆಧಾರದ ಮೇರೆಗೆ ಸಾಕ್ಷಿ ನುಡಿಯಲು ಬಂದಿರುತ್ತದೆ.

ಒಟ್ಟು ಕುಟುಂಬದಲ್ಲಿರುವ ಕಾರಣ ನಾವು ಉಳಿದ ವಿಸ್ತೀರ್ಣವನ್ನು ಸಾಗುವಳಿ ಮಾಡುತ್ತಿದ್ದೇನೆ. ವಾದಿ ದಾವಾ ಸ್ವತ್ತಿನಲ್ಲಿ ಯಾವ ರೀತಿಯಲ್ಲಿ ಸ್ವಾಧೀನದಲ್ಲಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ವೈಯಕ್ತಿಕ ಮಾಹಿತಿ ಇಲ್ಲ. ನನ್ನ ಹಾಗೂ ವಾದಿಯ ಸಂಬಂಧ ಚೆನ್ನಾಗಿರುವ ಕಾರಣ ಅವರ ಪರವಾಗಿ ಸಾಕ್ಷಿ ನುಡಿಯಲು ಬಂದಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮಾಲೀಕತ್ವ ಹಾಗೂ ಸ್ವಾಧೀನದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಹೌದು.

ಪಾಟೀ ಸವಾಲು ಮುಕ್ತಾಯ.

ಮರು ವಿಚಾರಣೆ ಇಲ್ಲ.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,

ಕೂಡ್ಲಿಗಿ.